# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೆ.ಆರ್.ಮಠದ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಸವಣೂರು, ಹಾವೇರಿ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ -1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ : Compt/ Uplok / BGM/ 2796 / 2016 /DRE-4, ದಿನಾಂಕ. 16.03.2018.

2. ಮಾನ್ಯ ಉಪಲೋಕಾಯುಕ್ತ-1ರವರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ: Compt/ Uplok / BGM/ 2796 / 2016 /DRE-4 ದಿನಾಂಕ. 05.03.2018.

*****

<u>ಪ್ರಸ್ತಾವನೆ:-</u>

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 16.03.2018ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12(3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಶ್ರೀ ಕೆ.ಆರ್.ಮಠದ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಸವಣೂರು ಇವರು ಹಲವಾರು ಲೋಪದೋಷಗಳನ್ನು ಎಸಗಿ ಸರ್ಕಾರಕ್ಕೆ ವಂಚನೆ ಮಾಡಿ, ಸರ್ಕಾರದ ಅನುದಾನವನ್ನು ದುರುಪಯೋಗಪಡಿಸಿಕೊಂಡು ಅಕ್ರಮ ಆಸ್ತಿಯನ್ನು ಹೊಂದಿರುತ್ತಾರೆಂದು ಆರೋಪಿಸಿ ಈ ಬಗ್ಗೆ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಶ್ರೀ ಕೆ.ಮಣಿಕಂಠ, ಜಿಲ್ಲಾಧ್ಯಕ್ಷರು ಶ್ರೀ ರಾಮ ಸೇನಾ (ರಿ) ಕರ್ನಾಟಕ, ದಾವಣಗೆರೆ ಜಿಲ್ಲೆ ಇವರು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತ ಅಧಿಕಾರಿಯವರು ಹೊಂದಿರುವ ಸ್ಥಿರಾಸ್ತಿ ಹಾಗೂ ಚರಾಸ್ತಿಗಳ ಬಗ್ಗೆ ತನಿಖೆ ನಡೆಸಿದ್ದು, ನಿವೇಶನ ಮತ್ತು ವಾಹನಗಳನ್ನು ಖರೀದಿಸಿರುವ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರದ ಅನುಮತಿ ಪಡೆದಿರುವುದಾಗಿ ವರದಿ ಸಲ್ಲಿಸಿರುತ್ತಾರೆಂದು ತಿಳಿಸಿರುತ್ತಾರೆ.

ನಂತರ ಲೋಕಾಯುಕ್ತ ಕಚೇರಿಯು ಸದರಿ ದೂರಿಗೆ ಸಂಬಂಧಿಸಿದಂತೆ ಆಪಾದಿತ ಅಧಿಕಾರಿಯಿಂದ ಆಕ್ಷೇಪಣೆಗಳನ್ನು ಕೇಳಲಾಗಿ, ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿಲ್ಲವೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1ರವರು ಕಡತ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಆಪಾದಿತ ಅಧಿಕಾರಿಯಾದ ಶ್ರೀ ಕೆ.ಆರ್.ಮಠದ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು 2017ರ ವರ್ಷಾಂತ್ಯಕ್ಕೆ ಸಲ್ಲಿಸಿದ ಚರ ಮತ್ತು ಸ್ಥಿರಾಸ್ತಿಯ ವಿವರಣೆಗಳಲ್ಲಿ ಈ ಕೆಳಕಂಡ ಲೋಪದೋಷಗಳು ಕಂಡುಬರುತ್ತದೆ ಎಂದು ತಿಳಿಸಿರುತ್ತಾರೆ:-

1. ಹಾವೇರಿಯ ಬಸವೇಶ್ವರ ನಗರದಲ್ಲಿ ಬಿ.ಶೇ.ಸ.ನಂ. 272/ಅ, ಪ್ಲಾಟ್ ನಂ. 14, 2 ಗುಂಟೆ 02.5 ಅಣೆ ವಿಸ್ತೀರ್ಣದ ನಿವೇಶನ ಖರೀದಿಸಲು ಹಾಗೂ ಸದರಿ ನಿವೇಶನದಲ್ಲಿ ಮನೆ ಕಟ್ಟಲು ಗೃಹ ಸಾಲ ಪಡೆಯುವ ಮೊದಲು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ.

2. ಆಪಾದಿತರ ಪತ್ನಿ ಶ್ರೀಮತಿ ವಿದ್ಯಾ ಕೆ ಮಠದ ಇವರ ಹೆಸರಿನಲ್ಲಿರುವ ಮಾರುತಿ ಕಂಪನಿಯ ಸ್ವಿಫ್ಟ್ ಡಿಜೈರ್ ಕಾರ್ ಸಂಖ್ಯೆ: ಕೆಎ 27 ಎಂ 9194 ಹಾಗೂ ಆಪಾದಿತರ ಹೆಸರಿನಲ್ಲಿರುವ ದ್ವಿಚಕ್ರ ವಾಹನ ಸಂಖ್ಯೆ: ಕೆಎ 27 ಯು 1974 ಗಳನ್ನು ಖರೀದಿಸುವ ಮೊದಲು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆದಿರುವ ಬಗ್ಗೆ ಹಾಗೂ ಆದಾಯದ ಮೂಲದ ಬಗ್ಗೆ ದಾಖಲೆಗಳಿಲ್ಲ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿದ ಚರಾಸ್ತಿ ಪಟ್ಟಿಯಲ್ಲಿ ಘೋಷಿಸಿಲ್ಲ.

3. 1993 ರಿಂದ 2010ರವರೆಗಿನ ಅವಧಿಯಲ್ಲಿ 40 ತೊಲ ಬಂಗಾರ ಉಡುಗೊರೆ ರೂಪದಿಂದ ಬಂದಿರುವ ಬಗ್ಗೆ ಹಾಗೂ 2011 ರಿಂದ 2017ರ ಅವಧಿಯಲ್ಲಿ 30 ತೊಲ ಬಂಗಾರ ಪಿತ್ರಾರ್ಜಿತವಾಗಿ ಹಾಗೂ ವೇತನ ಉಳಿತಾಯದಿಂದ ಖರೀದಿಸಿರುವ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿದ ಬಗ್ಗೆ ದಾಖಲೆಗಳಿಲ್ಲ.

4. ಆಪಾದಿತರ ಹೆಸರಿನಲ್ಲಿರುವ 16 ಜೀವ ವಿಮೆಗಳನ್ನು ಖರೀದಿಸಿದ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿದ ದಾಖಲೆಗಳಲ್ಲಿ ಒಂದು ಪಾಲಿಸಿ ಬಾಬ್ತು ಮಾತ್ರ ವೇತನದಲ್ಲಿ ಕಟಾವುಗೊಳ್ಳುತ್ತಿದ್ದು, ಉಳಿದ 15 ಜೀವ ವಿಮೆಗಳ ಮಾಸಿಕ ಕಂತುಗಳನ್ನು ಕಟ್ಟುತ್ತಿರುವ ಬಗ್ಗೆ ಆದಾಯದ ಮೂಲದ ಬಗ್ಗೆ ದಾಖಲೆಗಳಿಲ್ಲ. ಪಿತ್ರಾರ್ಜಿತವಾಗಿ ಬಂದಿರುವ ಬ್ಯಾಡಗಿ ತಾಲ್ಲೂಕು ಕದರಮಂಡಲಗಿ ಗ್ರಾಮದಲ್ಲಿರುವ 8.23 ಎಕರೆ ಕೃಷಿ ಜಮೀನಿನಲ್ಲಿ ಬರುವ ಇಳುವರಿಯ ಬಗ್ಗೆ ಮಾಹಿತಿ ಇಲ್ಲ. 2016-17ನೇ ಆರ್.ಟಿ.ಸಿ.ಗಳಲ್ಲಿ ಕದರಮಂಡಲಗಿ ಗ್ರಾಮದ ಸರ್ವೆ ನಂ. 237/1, 229/2, 241/1 ಮತ್ತು 244/1 ರಲ್ಲಿನ ಸ್ವತ್ತುಗಳು ಆಪಾದಿತ ಅಧಿಕಾರಿಯ ತಂದೆಯ ಹೆಸರಿನಲ್ಲಿರುತ್ತದೆ.

ಮೇಲೆ ತಿಳಿಸಿರುವಂತೆ ಆಪಾದಿತ ಅಧಿಕಾರಿಯಾದ ಶ್ರೀ ಕೆ.ಆರ್.ಮಠದ ಇವರು ಸ್ಥಿರ ಸ್ವತ್ತುಗಳನ್ನು ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆಯದೇ ಖರೀದಿಸಿರುವುದು ಮತ್ತು ಚರಾಸ್ತಿಗಳನ್ನು ಉಡುಗೊರೆ ಹಾಗೂ ಖರೀದಿ ರೂಪದಲ್ಲಿ ಅರ್ಜಿಸಿದ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ಕಾಲ ಕಾಲಕ್ಕೆ ವರದಿ ಮಾಡಿಲ್ಲದಿರುವುದು, ಗೃಹ ಸಾಲ ಮತ್ತು ವಾಹನ ಸಾಲವನ್ನು ಖಾಸಗಿ ಹಣಕಾಸು ಸಂಸ್ಥೆಗಳಿಂದ ಪಡೆದುಕೊಂಡಿರುವ ಬಗ್ಗೆಯೂ ಸಹ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು

ಪಡೆದಿಲ್ಲದಿರುವುದು ಕಂಡುಬಂದಿದೆಯೆಂದು, ಸದರಿಯವರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಕಾರಣ ತೋರಿಸಿಲ್ಲವೆಂದು, ಹಾಗಾಗಿ ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು, ಮಾನ್ಯ ಉಪ ಲೋಕಾಯುಕ್ತ-1ರವರ ವರದಿಯ ಜೊತೆ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಿರ್ವಹಿಸಲಾಗಿರುವ ಆಸ್ತಿ ಮತ್ತು ದಾಯತ್ವಗಳ ಕಡತವನ್ನು ಪರಿಶೀಲಿಸಿದ್ದು, ಶ್ರೀ ಕೆ.ಆರ್.ಮಠದ ಇವರು ಸರ್ಕಾರದಿಂದ ಯಾವುದೇ ಚರಾಸ್ತಿ / ಸ್ಥಿರಾಸ್ತಿಗಳ ಅರ್ಜನೆಗೆ ಅನುಮತಿ ಪಡೆದಿಲ್ಲದಿರುವುದು, ಕಳೆದ ಮೂರು ವರ್ಷಗಳ ಮಾಹಿತಿಯನ್ನು ಮಾತ್ರ ಸರ್ಕಾರಕ್ಕೆ ಸಲ್ಲಿಸಿದ್ದು, ಅದಕ್ಕೂ ಹಿಂದಿನ ಮಾಹಿತಿಯನ್ನು ಸಲ್ಲಿಸಿರುವ ಕುರಿತು ಯಾವುದೇ ದಾಖಲೆಗಳನ್ನು ಸಲ್ಲಿಸಿಲ್ಲದಿರುವುದು ಕಂಡುಬರುತ್ತದೆ. ಹಾಗಾಗಿ ಸದರಿ ಅಧಿಕಾರಿಯು ನಡತೆ ನಿಯಮಗಳ ಅನುಸಾರ ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ಕರ್ತವ್ಯ ಲೋಪವೆಸಗಿರುವುದು ಸ್ಪಷ್ಟವಾಗಿರುತ್ತದೆ. ಹಾಗಾಗಿ ಆಪಾದಿತ ಅಧಿಕಾರಿಯಾದ ಶ್ರೀ ಕೆ.ಆರ್.ಮಠದ ಇವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ. ಆದ್ದರಿಂದ, ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 66 ಇಎನ್‌ಕ್ಯೂ 2018 ಬೆಂಗಳೂರು, ದಿನಾಂಕ. 26.12.2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಕೆ.ಆರ್.ಮಠದ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಸವಣೂರು, ಹಾವೇರಿ ಜಿಲ್ಲೆ [ಹಾಲಿ ಕಾರ್ಯಪಾಲಕ ಇಂಜಿನಿಯರ್, (ಕೆ.ಸಿ.ಎಸ್.ಆರ್. ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರುವವರು) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ] ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ

ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ) 26/12/2018
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು - ಮುಖ ಪತ್ರದೊಂದಿಗೆ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಶ್ರೀ ಕೆ.ಆರ್.ಮಠದ, ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
8. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.